ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: CM

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE: 23/02/2020

ವಿಕ 23/2/20

# ಕಾವೇರಿ ಬಂಗಲೆಗೆ ಶೀಘ್ರವೇ ಬಿಎಸ್‌ವೈ

ಬೆಂಗಳೂರು: ಡಾಲರ್ಸ್ ಕಾಲೋನಿಯಲ್ಲಿನ ಧವಳಗಿರಿಯ ಮನೆಯಿಂದಲೇ ಕಾರ್ಯ ನಿರ್ವಹಿಸುತ್ತಿದ್ದ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಶೀಘ್ರದಲ್ಲಿ ಸರ್ಕಾರಿ ಬಂಗಲೆ ಕಾವೇರಿ ನಿವಾಸಕ್ಕೆ ಪ್ರವೇಶಿಸಲಿದ್ದಾರೆ.

ಇಷ್ಟು ದಿನ ಕಾವೇರಿ ನಿವಾಸದಲ್ಲಿ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ವಾಸವಿದ್ದರು. ಆದರೆ, ಸರ್ಕಾರದ ಆದೇಶದ ಹಿನ್ನೆಲೆಯಲ್ಲಿ ಕಳೆದ ತಿಂಗಳೇ ಅವರು ಮನೆ ಖಾಲಿ ಮಾಡಿದ್ದು, ಇದೀಗ ಅದೇ ಮನೆಗೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಆಗಮಿಸಲಿದ್ದಾರೆ. ಬಹುತೇಕ ಈ ತಿಂಗಳಾಂತ್ಯ ಇಲ್ಲವೆ ಮಾರ್ಚ್‌ನಲ್ಲಿ ಕಾವೇರಿ ನಿವಾಸಕ್ಕೆ ಯಡಿಯೂರಪ್ಪ ಅವರು ಪ್ರವೇಶಿಸಲಿದ್ದಾರೆ ಎಂದು ಗೊತ್ತಾಗಿದ್ದು, ಬೆಂಗಳೂರಿಗೆ ಭೇಟಿ ನೀಡಿದ್ದ ರಾಷ್ಟ್ರಪತಿ ರಾಮನಾಥ ಕೋವಿಂದ ಅವರಿಗೆ ಬೀಳ್ಕೊಡುಗೆ ನೀಡಿ ವಾಪಸ್ ಬರುವ ಸಂದರ್ಭದಲ್ಲಿ ಕಾವೇರಿ ನಿವಾಸಕ್ಕೆ ತೆರಳಿ ಅಲ್ಲಿನ ನವೀಕರಣದ ಮಾಹಿತಿ ಪಡೆದುಕೊಂಡಿದ್ದಾರೆ.

